ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ಹೌದು

ಆ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

611 ಶ್ರೀ ಪುಟ್ಟರಾಜು. ಸಿ.ಎಸ್. (ಮೇಲುಕೋಟೆ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಶುವೈದ್ಯಕೀಯ ಆಸ್ಪತ್ರೆಗಳೆಷ್ಟು;

ಆ) ಸದರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ಹಾಗೂ ಮೀಸಲಿಟ್ಟಿರುವ ಹಣ ಎಷ್ಟು;

ಇ) ಪ್ರಸ್ತುತ ವರ್ಷದಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು;

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) 23

ಆ) ಮೂಲಭೂತ ಸೌಲಭ್ಯ, ಸಿಬ್ಬಂದಿ ಹಾಗೂ ಪದವೀಧರ ಪಶುವೈದ್ಯರ ಕೊರತೆ ಇರುವುದರಿಂದ ಸದ್ಯಕ್ಕೆ ಪಶುವೈದ್ಯಕೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಪ್ರಕ್ರಿಯೆಯನ್ನು ಮುಂದೂಡಲಾಗಿದೆ. ಅದಕ್ಕಾಗಿ ಯಾವುದೇ ಹಣ ಮೀಸಲಿರಿಸಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

622 ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಜಿ. ಹೊಸಹಳ್ಳಿ ಬಳಿ ಹೊಸ ವಿದ್ಯುತ್ ಸ್ಥಾವರ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಮತ್ತು ಆ)

ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಜಿ. ಹೊಸಹಳ್ಳಿ ಮತ್ತು ಸುತ್ತ-ಮುತ್ತಲಿನ ಪ್ರದೇಶಗಳಿಗೆ 8 ಕಿ.ಮೀ. ದೂರದಲ್ಲಿರುವ 110 ಕೆ.ವಿ. ಕೆ.ಜಿ. ಟೆಂಪಲ್ ವಿದ್ಯುತ್ ಉಪ ಕೇಂದ್ರದಿಂದ ಹಾಗೂ 7 ಕಿ.ಮೀ. ದೂರದಲ್ಲಿರುವ 110 ಕೆ.ವಿ. ಗುಬ್ಬಿ ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಅಲ್ಲದೇ, 110 ಕೆ.ವಿ. ಕೆ.ಜಿ. ಟೆಂಪಲ್ ವಿದ್ಯುತ್ ಉಪ ಕೇಂದ್ರದ ಸಾಮರ್ಥ್ಯವನ್ನು ಹೆಚ್ಚಿಸಲು ಅನುಮೋದನೆ ದೊರಕಿರುತ್ತದೆ. ಶೀಘ್ರದಲ್ಲಿಯೇ ಈ ಕಾಮಗಾರಿ ಪ್ರಾರಂಭಗೊಳ್ಳುವುದರಿಂದ, ಜಿ. ಹೊಸಹಳ್ಳಿಯಲ್ಲಿ ಹೊಸ ವಿದ್ಯುತ್ ಉಪ ಕೇಂದ್ರದ ಅವಶ್ಯಕತೆ ಸದ್ಯಕ್ಕೆ ಇರುವುದಿಲ್ಲ.

167 ಡಾ: ಶರಣ ಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೇಡಂ ತಾಲ್ಲೂಕಿನ ಮದನಾ ಗ್ರಾಮದಲ್ಲಿ 110 ಕೆ.ವಿ. ವಿದ್ಯುತ್ ಉಪ ಕೇಂದ್ರ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಎಂದಿನಿಂದ ಮಂಜೂರು ಮಾಡಿ ಕಾಮಗಾರಿ ಪ್ರಾರಂಭಿಸಲಾಗುವುದು?

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಮತ್ತು ಆ)

ಪ್ರಸಕ್ತ ವರ್ಷವಾದ 2009-10 ರಲ್ಲಿ ಸೇಡಂ ವಿಧಾನ ಸಭಾ ಕ್ಷೇತ್ರದ ಮದನ ಗ್ರಾಮದಿಂದ ಅಂದಾಜು 12 ಕಿ.ಮೀ ದೂರದಲ್ಲಿರುವ ಗುರುಮಿಟ್ಕಲ್‌ನಲ್ಲಿ ಹೊಸದಾಗಿ 110 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದೆ. ಗುರುಮಿಟ್ಕಲ್‌ನಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ನಿರ್ಮಾಣ ಮಾಡಿ ಮುಂದಿನ ಲೋಡ್ ಬೆಳವಣಿಗೆಗಳನ್ನು ಗಮನಿಸಿ ಮದನದಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪನೆಯ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.